# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಸಂಖ್ಯೆ.29 ಕಾಚರಕನಹಳ್ಳಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕುವೆಂಪು ಪಾರ್ಕ್ ಪಕ್ಕದಲ್ಲಿರುವ ಪಾಲಿಕೆ ಕಟ್ಟಡದಲ್ಲಿ ದಿನಾಂಕ: 03-12-2022 ರಂದು ನಡೆದ ವಾರ್ಡ್ ಕಮಿಟಿ ಸಭೆಯ ನಡವಳಿಗಳು

ಹಾಜರಿದ್ದ ಸದಸ್ಯರು,

1. ಶ್ರೀಮತಿ ಶಾಂತ.ಬಿ, ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ ಹೆಚ್.ವಿ.ಕೃಷ್ಣಾರೆಡ್ಡಿ, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು,
3. ವೈದ್ಯಾಧಿಕಾರಿಗಳು, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ,
4. ಶ್ರೀಮತಿ ವಿನುತ, ಸದಸ್ಯರು,
5. ಶ್ರೀಮತಿ ಸರಸ್ವತಿ, ಸದಸ್ಯರು, ಜಲವಾಯು ವಿಹಾರ್ ಅಸೋಸಿಯೇಷನ್(ರಿ)
6. ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ),
7. ಶ್ರೀ ಸುಬ್ರಮಣಿ, ಸ್ಥಳೀಯರು,

ಹಾಜರಿದ್ದ ಅಧಿಕಾರಿಗಳು

1. ಶ್ರೀ ರವಿ, ಕಂದಾಯ ನಿರೀಕ್ಷಕರು,
2. ಶ್ರೀ ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು,
3. ಮಾರ್ಷಲ್, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ,
4. ಸಹಾಯಕ ಸಬ್ ಇನ್ಸ್‌ಪೆಕ್ಟರ್ (ಸಂಚಾರ ಮತ್ತು ಕಾನೂನು ಮತ್ತು ಸುವ್ಯವಸ್ಥೆ) ಬಾಣಸವಾಡಿ ಪೊಲೀಸ್ ಠಾಣೆ,
5. ಶ್ರೀ ರಾಜಶೇಖರ್, ಕಂದಾಯ ನಿರೀಕ್ಷಕರು,
6. ಶ್ರೀಮತಿ ರಾಜೇಶ್ವರಿ, ಕಲ್ಯಾಣ ಇಲಾಖೆ,
7. ಸಂಗೀತಾ, ಸಹಾಯಕ ಅಭಿಯಂತರರು, ಬಿಡಬ್ಲ್ಯೂ.ಎಸ್.ಎಸ್.ಬಿ
8. ಕಿರಿಯ/ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ,

ವಾರ್ಡ್ ಸಮಿತಿಯ ಪ್ರಾಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ, ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

ಸಭೆಯ ನಡವಳಿಗಳು

1) **ಘನತ್ಯಾಜ್ಯ ನಿರ್ವಹಣೆ:-** ಯಾವುದೇ ಸಮಸ್ಯೆ ಇರುವುದಿಲ್ಲ.

2) **ಬೀದಿ ದೀಪಗಳ ನಿರ್ವಹಣೆ:-**

- **ಶ್ರೀಮತಿ ವಿನುತ, ಸದಸ್ಯರು ರವರು ಮಾತನಾಡಿ:-** 3ನೇ ರಸ್ತೆ ಬಿಡಿಎ ಬಡಾವಣೆಯಲ್ಲಿ ವಿದ್ಯುತ್ ಕಂಬವನ್ನು ಸ್ಥಳಾಂತರಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಕೂಲಂಕುಷವಾಗಿ ಚರ್ಚಿಸಿ, ಸಭೆಯಲ್ಲಿ ಹಾಜರಿದ್ದ ವಿದ್ಯುತ್ ವಿಭಾಗದ ಗುತ್ತಿಗೆದಾರರಿಗೆ ಕ್ರಮ ವಹಿಸಲು ಸೂಚಿಸಲಾಯಿತು.

3) **ಬೃಹತ್ ನೀರುಗಾಲುವೆ:-** ಯಾವುದೇ ಸಮಸ್ಯೆ ಇರುವುದಿಲ್ಲ.

4) **ಆರೋಗ್ಯ ಇಲಾಖೆ:-**

- **ಆರೋಗ್ಯ ವೈದ್ಯಾಧಿಕಾರಿಗಳು ಮಾತನಾಡಿ** ಎಲ್ಲಾ ಕೋವಿಡ್ ಸಂಬಂಧಿಸಿದ ಪರೀಕ್ಷೆಗಳನ್ನು ಸದ್ಯಕ್ಕೆ ನಿಲ್ಲಿಸಲಾಗಿದ್ದು, ವ್ಯಾಕ್ಸಿನೇಷನ್, ಬೂಸ್ಟರ್ ವ್ಯಾಕ್ಸಿನೇಷನ್ ಮಾತ್ರ ಮಾಡಲಾಗುತ್ತಿರುತ್ತದೆ, ಹಾಗೂ ಯಾವುದೇ ಡೆಂಗ್ಯೂ ಫೀವರ್ ದೃಢಪಟ್ಟಿರುವುದಿಲ್ಲ ಎಂದು ಸಭೆಗೆ ತಿಳಿಸಿದರು. ಮತ್ತು ಮಹತ್ವಾಕಾಂಕ್ಷೆಯ ಯೋಜನೆಯಾದ ನಮ್ಮ ಕ್ಲಿನಿಕ್ ಅನ್ನು ಶೀಘ್ರವಾಗಿ ಪ್ರಾರಂಭಿಸಲಾಗುವುದೆಂದು ಸಭೆಗೆ ತಿಳಿಸಿದರು.

5) **ಕಾಮಗಾರಿ ಇಲಾಖೆ:-** ಯಾವುದೇ ಸಮಸ್ಯೆ ಇರುವುದಿಲ್ಲ.

6) **ಕಂದಾಯ ಇಲಾಖೆ:-**

- **ಕಂದಾಯ ನಿರೀಕ್ಷಕರು ಮಾತನಾಡಿ,** ವಾರ್ಡ್‌ನ ಕಂದಾಯ ನಿರೀಕ್ಷಕರು ಮಾತನಾಡಿ ಮತ ಪರಿಷ್ಕರಣೆ ಪ್ರಾರಂಭವಾಗಿದ್ದು, ತಮ್ಮ ತಮ್ಮ ಹೆಸರುಗಳು ಮತದಾರರ ಪಟ್ಟಿಯನ್ನು ನೊಂದಣಿಯಾಗಿರುವುದನ್ನು ಆನ್‌ಲೈನ್ ನಲ್ಲಿ ದೃಢಪಡಿಸಿಕೊಳ್ಳಬಹುದಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.

7) **ಉದ್ಯಾನವನಗಳ ವಿಭಾಗ:-**

- **ಶ್ರೀಮತಿ ವಿನುತ, ಸದಸ್ಯರು, ರವರು ಮಾತನಾಡಿ:-** ಬಡಾವಣೆಯ ಉದ್ಯಾನವನಗಳಲ್ಲಿ ಜಿಮ್ ಐಟಮ್‌ಗಳು ದುರಸ್ತಿಯಲ್ಲಿದ್ದು, ಅವುಗಳನ್ನು ಕೂಡಲೇ ದುರಸ್ತಿಪಡಿಸಲು ಪ್ರಸ್ತಾಪಿಸಿದಾಗ, ಸಭೆಯಲ್ಲಿ ಹಾಜರಿದ್ದ ತೋಟಗಾರಿಕಾ ವಿಭಾಗದ ಅಧಿಕಾರಿಗಳು ಪ್ರಾಜೆಕ್ಟ್ ಕಡೆಯಿಂದ ದುರಸ್ತಿಪಡಿಸಲು ಕ್ರಮ ವಹಿಸುವುದಾಗಿ ಸಭೆಗೆ ತಿಳಿಸಿದರು.

8) **ಅರಣ್ಯ ವಿಭಾಗ:-**

- **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ:-** ರಾಮಯ್ಯ ಬಡಾವಣೆಯಲ್ಲಿ ಹಲವು ಕಡೆಗಳಲ್ಲಿ ಮರಗಳನ್ನು ಟ್ರಿಮ್ ಮಾಡಬೇಕಾಗಿರುತ್ತದೆ, ಇಲ್ಲದಿದ್ದ ಪಕ್ಷದಲ್ಲಿ ರಸ್ತೆಯಲ್ಲಿನ ಚಟುವಟಿಕೆಗಲು ಸಿಸಿ ಕ್ಯಾಮೆರಾದಲ್ಲಿ ಸೆರೆಯಾಗುವುದಿಲ್ಲ ಎಂದು ಸಭೆಗೆ ತಿಳಿಸಿದಾಗ, ಸಭೆಯಲ್ಲಿ ಹಾಜರಿದ್ದ ಅರಣ್ಯ ವಿಭಾಗದ ಅಧಿಕಾರಿಗಳು ಕೂಡಲೇ ಪ್ರದೇಶವನ್ನು ಪರಿಶೀಲಿಸಿ, ಮರಗಳ ಟ್ರಿಮ್ ಮಾಡುವ ಕಾಮಗಾರಿಯನ್ನು ಕೈಗೊಳ್ಳುವುದಾಗಿ ಸಭೆಗೆ ತಿಳಿಸಿದರು.

9) **ಪಶುಸಂಗೋಪನೆ ವಿಭಾಗ:-** ಯಾವುದೇ ಸಮಸ್ಯೆ ಇರುವುದಿಲ್ಲ.

10) **ನೀರು ಸರಬರಾಜು:-** ಯಾವುದೇ ಸಮಸ್ಯೆ ಇರುವುದಿಲ್ಲ.

11) **ಪೊಲೀಸ್/ಸಂಚಾರ ಮತ್ತು ಕಾನೂನು ಸುವ್ಯವಸ್ಥೆ:-** ಯಾವುದೇ ಸಮಸ್ಯೆ ಇರುವುದಿಲ್ಲ.

12) **ಬೆಸ್ಕಾಂ ಇಲಾಖೆ :-**

- **ಶ್ರೀಮತಿ ವಿನುತ, ಸದಸ್ಯರು ರವರು ಮಾತನಾಡಿ:-** ಆಯಿಲ್ ಮಿಲ್ ರಸ್ತೆಯಲ್ಲಿ ವಿದ್ಯುತ್ ಕಂಬವನ್ನು ಸ್ಥಳಾಂತರಿಸಬೇಕಾಗಿರುತ್ತದೆ ಹಾಗೂ 3ನೇ ಜಿ ಮುಖ್ಯರಸ್ತೆಯಲ್ಲಿ ಕೇಬಲ್‌ಗಳನ್ನು ಯದ್ವಾತದ್ವ ಅಳವಡಿಸಿರುತ್ತಾರೆ ಮತ್ತು ಡಿಜಿಟಲ್ ಎನರ್ಜಿ ಮೀಟರ್‌ಗಳನ್ನು ಭಾಗಶಃ ಅಳವಡಿಸಿದ್ದು, ಬಾಕಿ ಪ್ರದೇಶಕ್ಕೆ ಅಳವಡಿಸಿರುವುದಿಲ್ಲ ಎಂದು ಸಭೆಗೆ ತಿಳಿಸಿದಾಗ ಸಭೆಯಲ್ಲಿ

ಹಾಜರಿದ್ದ ಬೆಸ್ಕಾಂ ಅಭಿಯಂತರರು, ಮೇಲಿನ ಎಲ್ಲಾ ಕಾಮಗಾರಿಗಳನ್ನು ಕೈಗೊಳ್ಳಲಾಗುವುದೆಂದು ಸಭೆಗೆ ತಿಳಿಸಿದರು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ನಿರ್ಣಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

**ಪ್ರತಿಯನ್ನು**

1) ಜಂಟಿ ಆಯುಕ್ತರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
4) ವಾರ್ಡ್ ಕಮಿಟಿಯ ಸದಸ್ಯರಿಗೆ.